**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 431 ಸೇನೀ 2016

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 28/12/2016

**ಸುತ್ತೋಲೆ**

ವಿಷಯ : ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರ ನೇಮಕಾತಿಗೆ ಅರ್ಜಿ ಸಲ್ಲಿಸುವ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕದಿಂದ ವಿನಾಯಿತಿ ನೀಡುವ ಬಗ್ಗೆ

ಉಲ್ಲೇಖ : ಅಧಿಸೂಚನೆ ಸಂಖ್ಯೆ: ಡಿಪಿಎಆರ್ 142 ಎಸ್‌ಆರ್‌ಆರ್ 2006, ದಿನಾಂಕ: 05/11/2007.

*****

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 13ರಲ್ಲಿ ಕರ್ನಾಟಕ ಲೋಕಸೇವಾ ಆಯೋಗ ಸೇರಿದಂತೆ ಇತರೆ ಆಯ್ಕೆ ಪ್ರಾಧಿಕಾರಗಳು ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರ ನೇಮಕಾತಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕದಿಂದ ವಿನಾಯಿತಿ ನೀಡಲಾಗಿರುತ್ತದೆ. ದಿನಾಂಕ: 05/11/2007ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 142 ಎಸ್‌ಆರ್‌ಆರ್ 2006ರನ್ವಯ ಅಂಗವಿಕಲ ಅಭ್ಯರ್ಥಿಗಳಿಗೂ ಅರ್ಜಿ ಶುಲ್ಕವನ್ನು ಪಾವತಿ ಮಾಡುವುದರಿಂದ ವಿನಾಯಿತಿ ನೀಡಲಾಗಿದೆ.

ಅದಾಗ್ಯೂ, ನೇಮಕಾತಿ / ಆಯ್ಕೆ ಪ್ರಾಧಿಕಾರಗಳು ನೇರ ನೇಮಕಾತಿ ಸಂದರ್ಭದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ಪಾವತಿ ಮಾಡುವುದರಿಂದ ವಿನಾಯಿತಿ ನೀಡದೇ ಶುಲ್ಕ ಪಾವತಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದುದರಿಂದ, ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗೆ ಅರ್ಜಿ ಆಹ್ವಾನಿಸುವ ಎಲ್ಲಾ ಆಯ್ಕೆ / ನೇಮಕಾತಿ ಪ್ರಾಧಿಕಾರಗಳು ಗೊತ್ತುಪಡಿಸಿದ ಅರ್ಜಿ ಶುಲ್ಕ ಪಾವತಿ ಮಾಡುವುದರಿಂದ ಅಂಗವಿಕಲ ಅಭ್ಯರ್ಥಿಗಳಿಗೆ ವಿನಾಯಿತಿ ನೀಡುವಂತೆ ಈ ಮೂಲಕ ಕಟ್ಟುನಿಟ್ಟಾಗಿ ಸೂಚಿಸಿದೆ.

(ಫೈರೋಜ಼ಾ. ಖಾನಂ)
ಸರ್ಕಾರದ ವಿಶೇಷ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 28/12/2016ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 200 ಪ್ರತಿಗಳನ್ನು ಒದಗಿಸಲು.

ಇವರಿಗೆ:

1. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
3. ಎಲ್ಲಾ ಇಲಾಖಾ ಮುಖ್ಯಸ್ಥರು
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
5. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
6. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
7. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
8. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
9. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
10. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
11. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
12. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
13. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)